ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ 15-09-2025 ರಂದು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎನ್ ಎಂ ಎಂ ನ್ಯಾಯವಾದಿರವರಿಂದಃ

ನಾನು ಸಲ್ಲಿಸುತ್ತಿರುವ ಪ್ರಮಾಣ ಪತ್ರದಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ಪಹಣಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ಮ್ಯೂಟೇಶನ ರಜಿಸ್ಟರನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-3 ಎಂದು, ಬಾಡ-2 ಗ್ರಾಮದ ಸರ್ವೇ ನಂ.507/8 ರ ಪಹಣಿಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎಂದು, ಬಾಡ-2 ಗ್ರಾಮದ ಸರ್ವೇ ನಂಬರ 507/8 ಕ್ಕೆ ಸಂಬಂಧಪಟ್ಟಂತೆ ನನ್ನ ಹೆಸರಿನಲ್ಲಿರುವ ಪಹಣಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-5 ಎಂದು, ಎ.ಡಿ.ಎಲ್.ಆರ್, ಕಾರವಾರ ಇವರ ದಿನಾಂಕಃ 21.10.2023 ರ ಆದೇಶವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-6 ಎಂದು, ಎಂ ಆರ್ ಸಂಖ್ಯೆ ಎಚ್72/2021 ರ ಮ್ಯೂಟೇಶನ ರಜಿಸ್ಟರ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-7 ಎಂದು, ಪರ್ಯಾವೇಕ್ಷಕರು, ಕಾರವಾರ ತಾಲೂಕು ಇವರು ನೀಡಿದ ಮೂರು ಸರ್ವೇ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ-8 ರಿಂದ ನಿಪಿ-10 ಎಂದು, ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-11 ಎಂದು, ಎ.ಡಿ.ಎಲ್.ಆರ್.ಕಾರವಾರ ಇಲ್ಲಿ ಸಲ್ಲಿಸಿದ ತಕರಾರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-12 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ನ್ಯಾಯಾವಾದಿರವರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಿವಿಲ್ ನ್ಯಾಯಾಧೀಶರು ಕಾರವಾರ**